ಅನುಬಂಧ – III

ಕರ್ನಾಟಕ ವಿಧಾನ ಸಭೆ
ಹದಿಮೂರನೇ ವಿಧಾನಸಭೆ
ಐದನೇ ಅಧಿವೇಶನ

ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2010
(2010ನೇ ವಿಧಾನಸಭೆಯ ವಿಧೇಯಕ ಸಂಖ್ಯೆ 01)

ಕರ್ನಾಟಕ ಸ್ಟಾಂಪು ಅಧಿನಿಯಮ, 1957ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸ್ಟಾಂಪು ಅಧಿನಿಯಮ, 1957ನ್ನು (1957ರ ಕರ್ನಾಟಕ ಅಧಿನಿಯಮ 34) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ ;

ಇದು, ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯದ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು :–

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.– (1) ಈ ಅಧಿನಿಯಮವನ್ನು **ಕರ್ನಾಟಕ ಸ್ಟಾಂಪು (ತಿದ್ದುಪಡಿ) ಅಧಿನಿಯಮ, 2010** ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

2. 9ನೇ ಪ್ರಕರಣದ ತಿದ್ದುಪಡಿ.– ಕರ್ನಾಟಕ ಸ್ಟಾಂಪು ಅಧಿನಿಯಮ, 1957ರ (1957ರ ಕರ್ನಾಟಕ ಅಧಿನಿಯಮ 34) 9ನೇ ಪ್ರಕರಣದ (1)ನೇ ಉಪಪ್ರಕರಣದ (ಎ) ಖಂಡದಲ್ಲಿ ಎರಡನೇ ಪರಂತುಕಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು ಎಂದರೆ :–

"ಮತ್ತು ಪರಂತು, ರಾಜ್ಯ ಸರ್ಕಾರವು ಸಾರ್ವಜನಿಕ ಹಿತದೃಷ್ಟಿಯಿಂದ, ವಿಶೇಷ ಅರ್ಥಿಕ ವಲಯ ಅಭಿವೃದ್ಧಿದಾರ, ಸಹ ಅಭಿವೃದ್ಧಿದಾರ, ಭೂಮಾಲೀಕರು, ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ಮಂಡಳಿ ಮತ್ತು

ಸರ್ಕಾರಿ ಆದೇಶ ಸಂಖ್ಯೆ ಸಿಐ 114 ಎಸ್‌ಪಿಐ 2007, ದಿನಾಂಕ: 28–2–2009ರಲ್ಲಿ ಪರಿಭಾಷಿಸಿದಂತೆ ಹಣಕಾಸು ಸಂಸ್ಥೆಗಳು ಇವುಗಳಿಂದ ಅಥವಾ ಇವುಗಳ ನಡುವಿನ ಯಾವುದೇ ಲಿಖಿತದ ಮೇಲೆ ಸಂದಾಯವಾಗತಕ್ಕ ಸ್ಟಾಂಪು ಶುಲ್ಕವನ್ನು ಅಧಿಸೂಚನೆ ಮೂಲಕ ಅದರಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಕಡಿಮೆಗೊಳಿಸಬಹುದು ಅಥವಾ ಮಾಫಿ ಮಾಡಬಹುದು.

ಮತ್ತು ಪರಂತು, ರಾಜ್ಯ ಸರ್ಕಾರವು, ಸಾರ್ವಜನಿಕ ಹಿತದೃಷ್ಟಿಯಿಂದ, ಅಧಿಸೂಚನೆಯ ಮೂಲಕ ಅದರಲ್ಲಿ ನಿರ್ದಿಷ್ಟಪಡಿಸಿದ ಹೊಸ ಮತ್ತು ಪ್ರಸ್ತುತ ಇರುವ ಮೈಕ್ರೋ, ಸಣ್ಣ, ಮಧ್ಯಮ ಉದ್ಯಮಗಳು, ದೊಡ್ಡ ಕೈಗಾರಿಕಾ ಘಟಕಗಳು ಮತ್ತು ಬೃಹತ್ ಯೋಜನೆಗಳು ವಿಸ್ತರಣೆ ಅಥವಾ ಆಧುನೀಕರಣ ಅಥವಾ ಬದಲಾವಣೆಗಳ ಯೋಜನೆಗಳನ್ನೂ ಒಳಗೊಂಡಂತೆ ಸರ್ಕಾರಿ ಆದೇಶ ಸಂಖ್ಯೆ ಸಿಐ 233 ಎಸ್‌ಪಿಐ 2008, ದಿನಾಂಕ: 28–2–2009 ರಲ್ಲಿ ಪರಿಭಾಷಿಸಿದಂತೆ, ಕರ್ನಾಟಕ ಕೈಗಾರಿಕಾ ನೀತಿ 2009–14 ಅಥವಾ ಸದರಿ ನೀತಿಯಲ್ಲಿ ಪರಿಭಾಷಿಸಿದಂತೆ ಅಂಥ ಪ್ರದಾನ ಕ್ಷೇತ್ರದ ಪ್ರಮುಖ ಯೋಜನೆಗಳ ಅಥವಾ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದಂತೆ, ಇವರುಗಳು ಬರೆದುಕೊಟ್ಟ ಯಾವುದೇ ಲಿಖಿತದ ಮೇಲೆ ಸಂದಾಯವಾಗುವ ಸ್ಟಾಂಪು ಶುಲ್ಕವನ್ನು 2014 ರ ಮಾರ್ಚ್ 31ರವರೆಗೆ ಕಡಿಮೆಗೊಳಿಸಬಹುದು ಅಥವಾ ಮಾಫಿ ಮಾಡಬಹುದು."

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಚಾಲ್ತಿಯಲ್ಲಿರುವ ಜಾಗತಿಕ, ಆರ್ಥಿಕ ಮುಗ್ಗಟ್ಟಿನೊಡನೆ ಹೋರಾಡಲು ಮತ್ತು 2009–14ನೇ ಸಾಲಿನ ಹೊಸ ಕೈಗಾರಿಕಾ ನೀತಿಯ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಗಾಗಿ ಉದ್ಯಮಿಗಳನ್ನು ಪ್ರೋತ್ಸಾಹಿಸುವುದಕ್ಕಾಗಿ ವಿಶೇಷ ಆರ್ಥಿಕ ವಲಯದಲ್ಲಿಯ ಪ್ರದಾನ ಕ್ಷೇತ್ರದ ಪ್ರಮುಖ ಯೋಜನೆಗಳು ಬರೆದುಕೊಡುವ ಯಾವುದೇ ಲಿಖಿತದ ಮೇಲೆ ಸಂದಾಯ ಮಾಡುವ ಸ್ಟಾಂಪು ಶುಲ್ಕವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕಡಿಮೆಗೊಳಿಸಲು ಅಥವಾ ಮಾಫಿ ಮಾಡಲು ಕರ್ನಾಟಕ ಸ್ಟಾಂಪು ಅಧಿನಿಯಮ, 1957ನ್ನು ತಿದ್ದುಪಡಿ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

ಆರ್ಥಿಕ ಜ್ಞಾಪನಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಸುಮಾರು 200 ಕೋಟಿ ರೂಪಾಯಿಗಳ ವೆಚ್ಚವನ್ನು ಒಳಗೊಂಡಿರುತ್ತದೆ.

ಜಿ.ಕರುಣಾಕರ ರೆಡ್ಡಿ
ಕಂದಾಯ ಸಚಿವರು

ಎಸ್.ಬಿ.ಪಾಟೀಲ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ

ಅನುಬಂಧ

ಕರ್ನಾಟಕ ಸ್ಟಾಂಪು ಅಧಿನಿಯಮ, 1957 (1957ರ ಕರ್ನಾಟಕ ಅಧಿನಿಯಮ, 34) ಉದ್ಧೃತ ಭಾಗ

9. ಸುಂಕಗಳನ್ನು ಕಡಿಮೆ ಮಾಡಲು, ಮಾಫಿ ಮಾಡಲು ಅಥವಾ ಅವುಗಳ ಬಗ್ಗೆ ರಾಜಿಮಾಡಿಕೊಳ್ಳಲು ಅಧಿಕಾರ.– (1) xx xx

(ಎ) xx xx

ಮತ್ತು ಪರಂತು, ರಾಜ್ಯ ಸರ್ಕಾರವು ಸಾರ್ವಜನಿಕ ಹಿತದೃಷ್ಟಿಯಿಂದ ಸರ್ಕಾರಿ ಆದೇಶ ಸಿಐ 319 ಎಸ್‌ಪಿಐ 2005, ದಿನಾಂಕ: 26.8.2006 ರಲ್ಲಿ ನಿರ್ದಿಷ್ಟಪಡಿಸಲಾದ ಅಥವಾ ಸದರಿ ನೀತಿಯಲ್ಲಿ ಪರಿಭಾಷಿಸಲಾದಂತೆ ಮುಖ್ಯ ಪ್ರದೇಶದ ಪ್ರಮುಖ ಯೋಜನೆಗಳ ಮೂಲಕ ನಿರ್ದಿಷ್ಟಪಡಿಸ ಲಾದಂತೆ ಅಥವಾ ಕಾಲಕಾಲಕ್ಕೆ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಹೊಸ ಕೈಗಾರಿಕಾ ನೀತಿಯಲ್ಲಿ ನಿರ್ದಿಷ್ಟಪಡಿಸಲಾದಂತೆ ಹೊಸ ಅಡಿ ಸಣ್ಣ ಪ್ರಮಾಣದ, ಸಣ್ಣ ಪ್ರಮಾಣದ, ಮಧ್ಯಮ ಪ್ರಮಾಣದ ಅಥವಾ ಬೃಹತ್ ಪ್ರಮಾಣದ ಕೈಗಾರಿಕಾ ಘಟಕಗಳು ಅಥವಾ ಮಹಾಯೋಜನೆಗಳನ್ನು ಅದರಲ್ಲಿ ನಿರ್ದಿಷ್ಟಪಡಿಸಲಾದಂತೆ ಕಾರ್ಯರೂಪಕ್ಕೆ ತರುವ ಯಾವುದೇ ಲಿಖಿತ ಪತ್ರದ ಮೇಲೆ ಸಂದಾಯ ಮಾಡತಕ್ಕ ಸ್ಟಾಂಪು ಸುಂಕವನ್ನು ಅಧಿಸೂಚನೆಯ ಮೂಲಕ 31ನೇ ಮಾರ್ಚ್ 2011ರವರೆಗೆ ಕಡಿತಗೊಳಿಸಬಹುದು ಅಥವಾ ಮಾಫಿಮಾಡಬಹುದು.

xx xx xx xx